(31)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ರಾಜರಾಜೇಶ್ವರಿ ನಗರ ವಲಯ, ಬೆಂಗಳೂರು

ಸಂಖ್ಯೆ:ಮುಅ/ರಾ.ರಾ.ನ/ಟಿ.ಎಸ್/64/2016-17

ಮುಖ್ಯ ಅಭಿಯಂತರರ ಕಛೇರಿ
ದಿನಾಂಕ: 27.05.2016

ತಾಂತ್ರಿಕ ಮಂಜೂರಾತಿ

ವಿಷಯ: Remodelling of Seggregation Point RCC Drain and development of water body at JP Park (Muthyalnagar) in Ward no. 17

ಉಲ್ಲೇಖ: 1)ಸದರಿ ಕಾಮಗಾರಿಗೆ 2014-15 ನೇ ಸಾಲಿನ ವಾರ್ಡ್ ಮಟ್ಟದ ಕಾಮಗಾರಿ ಸ್ಥಾಯಿ ಸಮಿತಿ ನಡವಳಿ ವಿಷಯ ಸಂಖ್ಯೆ: 341/14-15 ದಿನಾಂಕ: 27.03.2015 ರಂತೆ ಸಮಿತಿಯು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಕಾ.ಪಾ.ಅ ರಾ.ರಾ.ನಗರ ವಿಭಾಗ ರವರ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಕಾ.ಪಾ.ಅ/ರಾರಾನವಿ/ಆ.ಮಂ/09/2016-17 ದಿ:27.05.2016

2)ಜಾಬ್ ಕೋಡ್ ಸಂಖ್ಯೆ: **017-15-000032** ಪಿ-3089 **Special development works in 7 CMC & 1 TMC area**

*****

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ರಾ.ರಾ.ನಗರ) ರವರು ತಾಂತ್ರಿಕ ಮಂಜೂರಾತಿಯನ್ನು ಕೋರಿರುವ ಮೇರೆಗೆ, ಮಾನ್ಯ ಆಯುಕ್ತರು ನಿಯೋಜಿಸಿರುವ ಅಧಿಕಾರ ಪ್ರತ್ಯಾಯೋಜನೆ ಆದೇಶ ಸಂ: ಜಿ12(1)ಪಿ.ಆರ್/394/2011-12 ದಿನಾಂಕ:13.03.2012 ರಂತೆ ಸದರಿ ಕಾಮಗಾರಿಗೆ **ರೂ. 75.00 ಲಕ್ಷಗಳು (ರೂ. ಎಪ್ಪತ್ತೈದು ಲಕ್ಷಗಳು ಮಾತ್ರ) ಗಳಿಗೆ** ತಾಂತ್ರಿಕ ಮಂಜೂರಾತಿ ನೀಡಲಾಗಿದೆ ಮತ್ತು ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ **16-17** ಕ್ರಮ ಸಂಖ್ಯೆ **64** ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು

1. ಮಾನ್ಯ ಆಯುಕ್ತರವರ ಕಛೇರಿ ಸುತ್ತೋಲೆ ಸಂಖ್ಯೆ : ಆಯುಕ್ತರು/ಪಿಆರ್/176/15-16 ದಿನಾಂಕ: 22.12.2015 ರ ಆದೇಶದ ಮೇರೆಗೆ ಸದರಿ ಕಾಮಗಾರಿಯನ್ನು ಇನ್ಯಾವುದೆ ಅನುದಾನದ ಯೋಜನೆಯಲ್ಲಿ ಕೈಗೆತ್ತಿಗೊಂಡಿರುವುದಿಲ್ಲವೆಂದು ಅಥವಾ ಕಾಮಗಾರಿಗಳು ಪುನಾರವರ್ತಿತವಾಗಿಲ್ಲವೆಂದು ಹಾಗೂ ಈಗಾಗಲೇ ಚಾಲ್ತಿಯಲ್ಲಿರುವ/ಪೂರ್ಣಗೊಂಡಿರುವ ಕಾಮಗಾರಿಗಳು ಅಥವಾ ಲೋಕಾಯುಕ್ತ / ಯಾವುದೇ ಇಲಾಖಾ ವಿಚಾರಣೆ ಹಂತದಲ್ಲಿರುವ ಕಾಮಗಾರಿಗಳು ಸದರಿ ಕ್ರಿಯಾಯೋಜನೆಯಲ್ಲಿ ಸೇರ್ಪಡೆಮಾಡಿರುವುದಿಲ್ಲವೆಂದು ಅಥವಾ ಪುನರಾವರ್ತಿತವಾಗಿಲ್ಲವೆಂದು, ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗುವ ಪೂರ್ವದಲ್ಲೇ ಸಂಬಂಧಪಟ್ಟ ಕಾ.ಪಾ.ಅ/ಸ.ಕಾ.ಪಾ.ಇ/ವಾರ್ಡ್ ಅಭಿಯಂತರರು ಸ್ಥಳ ಪರಿಶೀಲಿಸಿ ದೃಢೀಕರಿಸಿ, ಖಚಿತಪಡಿಸಿಕೊಂಡ ನಂತರವಷ್ಟೆ ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಡಿಸಿದೆ.
2. ಈಗ ತಾಂತ್ರಿಕ ಮಂಜೂರಾತಿ ನೀಡಲಾಗಿರುವ ಯಾವುದೇ ಕಾಮಗಾರಿ ಬೇರೆ ಯಾವುದೇ ಇಲಾಖೆ ಅಥವಾ ಯೋಜನೆಯಡಿ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಿದ್ದಲ್ಲಿ ಆ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವಂತಿಲ್ಲ.
3. ಪ್ರತಿ ಕಾಮಗಾರಿಯ ಪ್ರಾರಂಭಕ್ಕೆ ಮುನ್ನಾ ಛಾಯಾ ಚಿತ್ರವನ್ನು ತೆಗೆದು ಈ ಕಛೇರಿಗೆ ಹಾಜರ್ ಪಡಿಸತಕ್ಕದ್ದು ಹಾಗೂ ಕಾಮಗಾರಿ ಪೂರ್ಣಗೊಂಡ ನಂತರ ಪುನಃ ಛಾಯಾ ಚಿತ್ರ ತೆಗೆದು ಪರಿಶೀಲನೆ ಸಮಯದಲ್ಲಿ ಈ ಛಾಯಾ ಚಿತ್ರವನ್ನು ಹಾಜರುಪಡಿಸತಕ್ಕದ್ದು.
4. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೇಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
5. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ-1999 ಮತ್ತು ನಿಯಮ-2000 ಹಾಗೂ ಸರ್ಕಾರ ನಿಗಧಿಪಡಿಸಿರುವ Standard Bidding Documents ಅನ್ನು ಅಳವಡಿಸಿಕೊಂಡು ನಿರ್ವಹಿಸುವುದು.
6. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಕ್ಷಮ ಪ್ರಾಧಿಕಾರದಿಂದ ಟೆಂಡರ್ ಅನುಮೋದನೆ ಪಡೆಯುವುದು.
7. ಇಡಿಗಂಟು (Lumpsum/Miscellaneous Amt) ಬೆಚ್ಚದ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.
8. ಸಕ್ಷಮ ಪ್ರಾಧಿಕಾರದಿಂದ ಕರಡು ಟೆಂಡರ್ ಪ್ರತಿಯನ್ನು ಅನುಮೋದನೆ ಪಡೆಯುವುದು.
9. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
10. ರಸ್ತೆ ಇತಿಹಾಸ ಪುಸ್ತಕದಲ್ಲಿ ಕಾಮಗಾರಿಯ ಕೆಲಸಗಳಾದ ಚಿಪ್‌ಕಾರ್ಪೆಟಿಂಗ್, ಜೆಲ್ಲಿರಸ್ತೆ, ಡಾಂಬರೀಕರಣದ ಕೆಲಸವನ್ನು ನಮೂದಿಸುವುದು.
11. ರಸ್ತೆಗೆ ಬಿ.ಬಿ.ಎಂ/ ಡಿ.ಬಿ.ಎಂ ಹಾಕಿದ್ದಲ್ಲಿ Benkelman Beam Deflection report ನ್ನು ಕಡ್ಡಾಯವಾಗಿ ಸಲ್ಲಿಸಲು ತಿಳಿಸಿದೆ.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿ ನಗರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:
1)ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.
2)ಕಾರ್ಯಪಾಲಕ ಅಭಿಯಂತರರು, ರಾ.ರಾ.ನಗರ ವಿಭಾಗ ರವರ ಮಾಹಿತಿಗಾಗಿ.

Scanned by CamScanner